ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 50
2. ಸದಸ್ಯರ ಹೆಸರು : ಶ್ರೀ ಎನ್.ಅಪ್ಪಾಜಿಗೌಡ
3. ಉತ್ತರಿಸಬೇಕಾದ ದಿನಾಂಕ : 09-07-2018

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿಯ ಬೋಳಾರೆಕೆರೆಯು ಸುಮಾರು 452 ಎಕರೆಗಳಾಗಿದ್ದು, ಈ ಕೆರೆಯನ್ನು ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೊಳಿಸಲು ರೂ.299.50 ಲಕ್ಷ ಅನುಮೋದನೆಯಾಗಿ ಮಂಜೂರಾತಿ ನೀಡಲಾಗಿದ್ದರೂ ಇದುವರೆವಿಗೂ ಟೆಂಡರ್ ಕರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿರುತ್ತದೆ. ತಾಂತ್ರಿಕ ಬಿಡ್‌ಗಳು ಸ್ವೀಕೃತವಾಗಿದ್ದು, ತಾಂತ್ರಿಕ ಬಿಡ್ ಪರಿಶೀಲನೆಯಲ್ಲಿರುತ್ತದೆ.
ಆ	ಹಾಗಿದ್ದಲ್ಲಿ, ಟೆಂಡರ್ ಕರೆಯದೇ ಇರುವುದಕ್ಕೆ ಕಾರಣಗಳೇನು ; ಮತ್ತು ಟೆಂಡರ್ ಕರೆಯದೆ ಇರುವ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು; (ಪೂರ್ಣ ಮಾಹಿತಿ ನೀಡುವುದು)	
ಇ	ಶಿಂಷಾ ನದಿಗೆ ಅಡ್ಡಲಾಗಿ ಕುಡುಗುಬಾಳು ಮತ್ತು ಯಡವನಹಳ್ಳಿ ಹತ್ತಿರ ಚೆಕ್‌ಡ್ಯಾಂ ನಿರ್ಮಾಣ ಮಾಡಿ ಇಲ್ಲಿಂದ ಬೋಳಾರೆಕೆರೆಗೆ ಮತ್ತು ವಿ.ಸಿ. ನಾಲಾಗೆ ಸಂಪರ್ಕ ಕಲ್ಪಿಸಿ ಕುಂಠಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸುವ ಯೋಜನೆಯನ್ನು ಮಂಜೂರು ಮಾಡದಿರಲು ಕಾರಣವೇನು? (ಪೂರ್ಣ ಮಾಹಿತಿ ನೀಡುವುದು)	ಸದರಿ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಕಾವೇರಿ ನೀರಾವರಿ ನಿಗಮದಲ್ಲಿ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ:ಜಸಂಇ 42 ಎಸ್‌ಎಲ್‌ಎ 2018

(ಡಿ.ಕೆ.ಶಿವಕುಮಾರ್)
ಜಲ ಸಂಪನ್ಮೂಲ ಸಚಿವರು